All India Radio: Bangalore
National Bulletin In Kannada
25.11.2026 1.10 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
25.11.2026 1.10 p.m.
<><><><>

ಮುಖ್ಯಾಂಶಗಳು

1. ೨೦೪೭ರ ವೇಳೆಗೆ 'ವಿಕಸಿತ ಭಾರತ' ನಿರ್ಮಾಣದಲ್ಲಿ ಆರೋಗ್ಯ , ಶಿಕ್ಷಣ ಪ್ರಮುಖ ಆಧಾರಸ್ತಂಭ -ರಾಷ್ಟ್ರಪತಿ ದ್ರೌಪದಿ ಮುರ್ಮು
2. ಸಂಘರ್ಷದ ಸನ್ನಿವೇಶಗಳಲ್ಲಿ ಮಾನವ ಕೇಂದ್ರಿತ, ಜವಾಬ್ದಾರಿಯುತ ವಿಧಾನ ಅನುಸರಿಸುವಂತೆ ಭಾರತ ಕರೆ
3. ೩೨೪ ಔಷಧಗಳ ಮಾದರಿ ಪ್ರಮಾಣಿತ ಗುಣಮಟ್ಟ ಹೊಂದಿಲ್ಲ: ಕೇಂದ್ರ ಔಷಧ ಪ್ರಯೋಗಾಲಯ
4. ಮಹಿಳಾ ಏಷ್ಯನ್ ಚಾಂಪಿಯನ್ಸ್ ಹಾಕಿ ಟ್ರೋಫಿ: ಅಂತಿಮ ಲೀಗ್ ಹಂತದ ಪಂದ್ಯದಲ್ಲಿ ಇಂದು ಭಾರತ -ಜಪಾನ್ ಮುಖಾಮುಖಿ

<><><><>

ಹೋಮಿಯೋಪತಿ ಚಿಕಿತ್ಸಾ ಪದ್ಧತಿಯ ವಿಶ್ವಾಸಾರ್ಹತೆಯನ್ನು ಹೆಚ್ಚಿಸಲು ವೈಜ್ಞಾನಿಕ ಸಂಶೋಧನೆ, ಸಾಕ್ಷ್ಯಾಧಾರಿತ ಮೌಲ್ಯಮಾಪನ ಮತ್ತು ರೋಗಿಗಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ. ಎರಡು ದಿನಗಳ ಒಡಿಶಾ ಪ್ರವಾಸದ ಕೊನೆಯ ದಿನವಾದ ಇಂದು, ಭುವನೇಶ್ವರದ ಡಾ.ಅಭಿನಾ ಚಂದ್ರ ಹೋಮಿಯೋಪತಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನಡೆದ ರಾಷ್ಟ್ರೀಯ ವೈಜ್ಞಾನಿಕ ಸಮಾವೇಶವನ್ನುದ್ದೇಶಿಸಿ ಅವರು ಮಾತನಾಡಿದರು. ೨೦೪೭ರ ವೇಳೆಗೆ 'ವಿಕಸಿತ ಭಾರತ' ನಿರ್ಮಿಸುವ ದೇಶದ ಸಂಕಲ್ಪದಲ್ಲಿ ಆರೋಗ್ಯ ಮತ್ತು ಶಿಕ್ಷಣ ಪ್ರಮುಖ ಎರಡು ಆಧಾರಸ್ತಂಭಗಳಾಗಿರಬೇಕು ಎಂದು ಅವರು ಹೇಳಿದ್ದಾರೆ. ಹೋಮಿಯೋಪತಿ ಚಿಕಿತ್ಸಾ ಪದ್ಧತಿಯ ಭವಿಷ್ಯವು ವೈಜ್ಞಾನಿಕ ಸಮಗ್ರತೆ, ಸಮಗ್ರ ಸಂಶೋಧನೆ ಮತ್ತು ವೈದ್ಯಕೀಯ ಸಾಕ್ಷ್ಯಾಧಾರಗಳ ಮೇಲೆ ರೂಪುಗೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ. ಕೃತಕ ಬುದ್ಧಿಮತ್ತೆ, ಡಿಜಿಟಲ್ ಆರೋಗ್ಯ

ತಂತ್ರಜ್ಞಾನಗಳು ಮತ್ತು ಆಧುನಿಕ ಸಂಶೋಧನೆಯ ಪರಿವರ್ತನಾತ್ಮಕ ಪಾತ್ರವನ್ನು ಪ್ರಸ್ತಾಪಿಸಿದ ರಾಷ್ಟ್ರಪತಿ, ಹೋಮಿಯೋಪತಿ ಸಂಸ್ಥೆಗಳು, ತಾಂತ್ರಿಕ ಪ್ರಗತಿ ಹಾಗೂ ಸಮಕಾಲೀನ ಬೋಧನಾ ವಿಧಾನಗಳನ್ನು ಅಳವಡಿಸಿಕೊಳ್ಳಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸಲಹೆ ನೀಡಿದ್ದಾರೆ.

<><><><>

ಸಂಘರ್ಷದ ಸನ್ನಿವೇಶಗಳಲ್ಲಿ ಕೃತಕ ಬುದ್ಧಿಮತ್ತೆ ಸೇರಿದಂತೆ ಉದಯೋನ್ಮುಖ ತಂತ್ರಜ್ಞಾನಗಳ ಬಳಕೆಗೆ ಮಾನವ ಕೇಂದ್ರಿತ ಹಾಗೂ ಜವಾಬ್ದಾರಿಯುತ ವಿಧಾನ ಅನುಸರಿಸುವಂತೆ ಭಾರತ ಕರೆ ನೀಡಿದೆ. ತಂತ್ರಜ್ಞಾನ ಬಳಕೆಯಲ್ಲಿ ಮಾನವ ವಿವೇಚನೆ ಮತ್ತು ಮೇಲ್ವಿಚಾರಣೆಗೆ ಸದಾ ಆದ್ಯತೆ ನೀಡಬೇಕು ಎಂದು ಭಾರತ ಒತ್ತಿಹೇಳಿದೆ. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ನಡೆದ ಚರ್ಚೆಯಲ್ಲಿ ಮಾತನಾಡಿದ ವಿಶ್ವಸಂಸ್ಥೆಗೆ ಭಾರತದ ಖಾಯಂ ಪ್ರತಿನಿಧಿ ಹರೀಶ್ ಪರ್ವತನೇನಿ, ತಂತ್ರಜ್ಞಾನ ಕ್ಷೇತ್ರದಲ್ಲಿನ ತ್ವರಿತ ಪ್ರಗತಿಯು ಸಂಘರ್ಷಗಳ ಸ್ವರೂಪವನ್ನು ಬದಲಾಯಿಸುತ್ತಿದ್ದು, ಹೊಸ ಭದ್ರತಾ ಸವಾಲುಗಳನ್ನು ಸೃಷ್ಟಿಸುತ್ತಿದೆ ಎಂದು ಹೇಳಿದ್ದಾರೆ. ಕೃತಕ ಬುದ್ಧಿಮತ್ತೆ, ಸ್ವಾಯತ್ತ ವ್ಯವಸ್ಥೆಗಳು ಮತ್ತು ಡಿಜಿಟಲ್ ವೇದಿಕೆಗಳಂತಹ ತಂತ್ರಜ್ಞಾನಗಳು ಮುನ್ನೆಚ್ಚರಿಕೆ ವ್ಯವಸ್ಥೆಗಳ ಮೂಲಕ ಸಂಘರ್ಷಗಳನ್ನು ತಡೆಗಟ್ಟಲು, ಶಾಂತಿಪಾಲನಾ ಕಾರ್ಯಾಚರಣೆಗಳನ್ನು ಸುಧಾರಿಸಲು ಹಾಗೂ ನಾಗರಿಕರು ಮತ್ತು ಮಾನವೀಯ ನೆರವು ಕಾರ್ಯಕರ್ತರ ರಕ್ಷಣೆಗೆ ಸಹಕಾರಿಯಾಗಬಲ್ಲವು ಎಂದು ಅವರು ತಿಳಿಸಿದ್ದಾರೆ. ಭಯೋತ್ಪಾದಕ ಗುಂಪುಗಳು ಮತ್ತು ಸರ್ಕಾರೇತರ ಸಂಘಟನೆಗಳು, ಕೃತಕ ಬುದ್ಧಿಮತ್ತೆಯನ್ನು ದುರುಪಯೋಗಪಡಿಸಿಕೊಳ್ಳುವ ಸಾಧ್ಯತೆಯ ಬಗ್ಗೆ ಅವರು ಎಚ್ಚರಿಕೆ ನೀಡಿದ್ದಾರೆ. ಅಂತಾರಾಷ್ಟ್ರೀಯ ಕಾನೂನಿಗೆ ಅನುಗುಣವಾಗಿ ಸ್ವಾಯತ್ತ ಶಸ್ತ್ರಾಸ್ತ್ರಗಳ ಬಳಕೆಗೆ ಸಂಬಂಧಿಸಿದ ನಿರ್ಧಾರಗಳ ಹೊಣೆಗಾರಿಕೆ ಮಾನವರ ಮೇಲೆಯೇ ಇರಬೇಕು ಎಂದು ಅವರು ಒತ್ತಿಹೇಳಿದ್ದಾರೆ.

<><><><>

ಕೇಂದ್ರ ಔಷಧ ಪ್ರಯೋಗಾಲಯವು ೩೭ ಔಷಧ ಮಾದರಿಗಳನ್ನು ಪ್ರಮಾಣಿತ ಗುಣಮಟ್ಟ ಹೊಂದಿಲ್ಲ ಎಂದು ಗುರುತಿಸಿವೆ. ಅದೇ ರೀತಿ, ರಾಜ್ಯ ಮಟ್ಟದ ಔಷಧ ಪರೀಕ್ಷಾ ಪ್ರಯೋಗಾಲಯಗಳು ೨೮೭ ಔಷಧ ಮಾದರಿಗಳನ್ನು ಪ್ರಮಾಣಿತ ಗುಣಮಟ್ಟ ಹೊಂದಿಲ್ಲ ಎಂದು ಗುರುತಿಸಿವೆ. ನಿಯಮಿತ ನಿಯಂತ್ರಕ ಮೇಲ್ವಿಚಾರಣಾ ಚಟುವಟಿಕೆಯ ಭಾಗವಾಗಿ, ಇಂತಹ ಗುಣಮಟ್ಟವಿಲ್ಲದ ಮತ್ತು ನಕಲಿ ಔಷಧಗಳ ಪಟ್ಟಿಯನ್ನು 'ಸೆಂಟ್ರಲ್ ಡ್ರಗ್ಸ್ ಸ್ಟ್ಯಾಂಡರ್ಡ್

ಕಂಟ್ರೋಲ್ ಆರ್ಗನೈಸೇಶನ್' ತನ್ನ ಪೋರ್ಟಲ್‌ನಲ್ಲಿ ಪ್ರತಿ ತಿಂಗಳು ಪ್ರಕಟಿಸುತ್ತದೆ. ಒಂದು ಔಷಧ ಮಾದರಿಯು, ನಿಗದಿತ ಗುಣಮಟ್ಟದ ಮಾನದಂಡಗಳಲ್ಲಿ ಒಂದನ್ನು ಅಥವಾ ಹೆಚ್ಚಿನದನ್ನು ಪೂರೈಸಲು ವಿಫಲವಾದಾಗ, ಅದನ್ನು ಪ್ರಮಾಣಿತ ಗುಣಮಟ್ಟ ಹೊಂದಿಲ್ಲ ಎಂದು ಗುರುತಿಸಲಾಗುತ್ತದೆ. ಈ ವೈಫಲ್ಯವು ಸರ್ಕಾರಿ ಪ್ರಯೋಗಾಲಯದಲ್ಲಿ ಪರೀಕ್ಷಿಸಲಾದ ನಿರ್ದಿಷ್ಟ ಬ್ಯಾಚ್‌ನ ಔಷಧಗಳಿಗೆ ಮಾತ್ರ ಸೀಮಿತವಾಗಿರುತ್ತದೆ. ಆದ್ದರಿಂದ ಮಾರುಕಟ್ಟೆಯಲ್ಲಿ ಲಭ್ಯವಿರುವ ಇತರ ಔಷಧಗಳ ಬಗ್ಗೆ ಆತಂಕಪಡುವ ಅಗತ್ಯವಿರುವುದಿಲ್ಲ.

<><><><>

೫೭ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ, ಗೋವಾದ ಮನರಂಜನಾ ಸೊಸೈಟಿಯ ಮಳಿಗೆಯು ಉತ್ಸವ-ವಿಷಯದ ಸ್ಮರಣಿಕೆಗಳ ಶ್ರೇಣಿಯೊಂದಿಗೆ ಪ್ರವಾಸಿಗರನ್ನು ಆಕರ್ಷಿಸುತ್ತಿದೆ. ಈ ಮಳಿಗೆಯು ಕೋಸ್ಟರ್‌ಗಳು, ಬಾಟಲ್ ಓಪನರ್‌ಗಳು, ಮ್ಯಾಗ್ನೆಟ್‌ಗಳು ಮತ್ತು ಬ್ಯಾಗ್‌ಗಳು ಸೇರಿದಂತೆ ವಿವಿಧ ಉತ್ಪನ್ನಗಳನ್ನು ನೀಡುತ್ತದೆ. ಎಲ್ಲವೂ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಲಾಂಛನವನ್ನು ಒಳಗೊಂಡಿವೆ. ಸಿನಿಮಾ ರೀಲ್‌ಗಳು ಮತ್ತು ಕ್ಯಾಮೆರಾ ನೆಗೆಟಿವ್‌ಗಳ ಆಕಾರದಲ್ಲಿರುವ ಆಯಸ್ಕಾಂತಗಳು ಚಲನಚಿತ್ರ ಉತ್ಸಾಹಿಗಳ ಗಮನವನ್ನು ಸೆಳೆಯುತ್ತಿವೆ. ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ 'ಕ್ರಿಯೇಟಿವ್ ಮೈಂಡ್ಸ್ ಆಫ್ ಟುಮಾರೋ' ಆರನೇ ಆವೃತ್ತಿಯಲ್ಲಿ ಮೋಹಕ್ ಗಾಂಧಿ ನಿರ್ದೇಶಿಸಿದ 'ಒನ್ ಲಾಸ್ಟ್ ಸ್ನಾಪ್' ಚಲನಚಿತ್ರವು 'ಅತ್ಯುತ್ತಮ ಚಲನಚಿತ್ರ' ಪ್ರಶಸ್ತಿಯನ್ನು ಗೆದ್ದುಕೊಂಡಿತು. ಇದರೊಂದಿಗೆ ಐದು ಲಕ್ಷ ರೂಪಾಯಿಗಳ ನಗದು ಬಹುಮಾನ ಪಡೆಯಿತು. ಅದೇ ರೀತಿ, ತಮನ್ನಾ ಠಾಕೂರ್ ನಿರ್ದೇಶಿಸಿದ 'ಎ ಲಿಟಲ್ ಸಂಥಿಂಗ್' ಚಲನಚಿತ್ರ ದ್ವಿತೀಯ ಸ್ಥಾನ ಹಾಗೂ ಮೂರು ಲಕ್ಷ ರೂಪಾಯಿಗಳ ನಗದು ಬಹುಮಾನ ತನ್ನದಾಗಿಸಿಕೊಂಡಿತು.

<><><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ನಾಗ್ಪುರ ವಿಶ್ವವಿದ್ಯಾಲಯದಲ್ಲಿ 'ಸ್ವಯಂಸಿದ್ಧ ರಾಷ್ಟ್ರೀಯ ಸಮ್ಮೇಳನ ೨೦೨೬ ಅನ್ನು ಉದ್ಘಾಟಿಸಿದರು. 'ವಿಜಯ: ಶಿಕ್ಷಣದ ಮೂಲಕ ಸಬಲೀಕರಣದ ಪಯಣ' ಎಂಬ ಶೀರ್ಷಿಕೆಯಡಿ ಆಯೋಜಿಸಲಾದ ಎರಡು ದಿನಗಳ ಈ ರಾಷ್ಟ್ರೀಯ ಸಮ್ಮೇಳನವನ್ನು ರಾಷ್ಟ್ರಸಂತ ತುಕಾಡೋಜಿ ಮಹಾರಾಜ್ ನಾಗ್ಪುರ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದೆ.

<><><><><>

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಡಿಯಲ್ಲಿ ಬರುವ 'ಡಾ.ಅಂಬೇಡ್ಕರ್ ಫೌಂಡೇಶನ್', ನವದೆಹಲಿಯ ಡಾ.ಅಂಬೇಡ್ಕರ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ನಾಳೆ 'ಸಂವಿಧಾನ ದಿನ' ಆಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ಭಾಗವಹಿಸಲಿದ್ದಾರೆ. ಕಾರ್ಯಕ್ರಮವು ೧೯೪೯ರ ನವೆಂಬರ್ ೨೬ರಂದು ಭಾರತದ ಸಂವಿಧಾನವನ್ನು ಅಂಗೀಕರಿಸಿದ ದಿನವನ್ನು ಸ್ಮರಿಸುತ್ತದೆ ಮತ್ತು ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಅಪಾರ ಕೊಡುಗೆಯನ್ನು ಪುನರುಚ್ಚರಿಸುತ್ತದೆ. ಸಂವಿಧಾನಾತ್ಮಕ ಮೌಲ್ಯಗಳು, ಸಾಮಾಜಿಕ ಪರಿವರ್ತನೆ, ಸಾಮಾಜಿಕ ನ್ಯಾಯ ಮತ್ತು ಭಾರತೀಯ ಪ್ರಜಾಪ್ರಭುತ್ವದ ಭವಿಷ್ಯದ ಕುರಿತು ಅರ್ಥಪೂರ್ಣ ಅಭಿಪ್ರಾಯ ವಿನಿಮಯಕ್ಕೆ ವೇದಿಕೆಯಾಗುವ ಶೈಕ್ಷಣಿಕ ಸಂವಾದ ನಡೆಯಲಿದೆ. 'ಸಂವಿಧಾನ @೭೯: ಡಾ. ಬಿ.ಆರ್.ಅಂಬೇಡ್ಕರ್ ಅವರ ಸಾಂವಿಧಾನಿಕ ದೃಷ್ಟಿಕೋನ ಮತ್ತು ಭಾರತೀಯ ಪ್ರಜಾಪ್ರಭುತ್ವದ ಭವಿಷ್ಯ' ಎಂಬ ವಿಷಯದಡಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ತಿಳಿಸಿದೆ.

<><><><><>

ಇದೇ ೨೯ರಂದು ಆಕಾಶವಾಣಿಯಲ್ಲಿ ಪ್ರಸಾರವಾಗಲಿರುವ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶ ಮತ್ತು ವಿದೇಶಗಳಲ್ಲಿರುವ ಸಮಸ್ತ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಈ ಮಾಸಿಕ ಬಾನುಲಿ ಕಾರ್ಯಕ್ರಮದ ೧೪೦ನೇ ಸಂಚಿಕೆಯಾಗಲಿದೆ. ಕಾರ್ಯಕ್ರಮಕ್ಕಾಗಿ ಜನರು ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಸಲ್ಲಿಸಬಹುದು. ನರೇಂದ್ರ ಮೋದಿ ಆಪ್ ಅಥವಾ ಮೈ ಜಿಒವಿ ಓಪನ್ ಫೋರಮ್ ಮೂಲಕವೂ ಆನ್‌ಲೈನ್‌ನಲ್ಲಿ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದು. ನಾಗರಿಕರು, ೧೯೨೨ ಸಂಖ್ಯೆಗೆ ಮಿಸ್ಡ್ ಕಾಲ್ ನೀಡಿ, ಎಸ್‌ಎಂಎಸ್‌ನಲ್ಲಿ ಬರುವ ಲಿಂಕ್ ಅನ್ನು ಅನುಸರಿಸುವ ಮೂಲಕ ಪ್ರಧಾನಮಂತ್ರಿ ಅವರಿಗೆ ನೇರವಾಗಿ ತಮ್ಮ ಸಲಹೆಗಳನ್ನು ನೀಡಬಹುದು. ಮುಂಬರುವ

ಸಂಚಿಕೆಗಾಗಿ ಸಾರ್ವಜನಿಕರ ಆಲೋಚನೆಗಳು ಮತ್ತು ಸಲಹೆಗಳನ್ನು ಇದೇ ತಿಂಗಳ ೨೭ರವರೆಗೆ ಸ್ವೀಕರಿಸಲಾಗುವುದು.

<><><><>

ಭಾರತದ ವಸತಿ ನೆರವು ಕಾರ್ಯಕ್ರಮದ ಅಡಿಯಲ್ಲಿ, ಶ್ರೀಲಂಕಾದ ತೋಟಗಾರಿಕಾ ಸಮುದಾಯಗಳಲ್ಲಿ ೩೭ ನೂತನ ಮನೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಕಲುತಾರಾ ಜಿಲ್ಲೆಯ ಕಿರಿವಾನಕೆಟ್ಟಿಯ ಮತ್ತು ಕೊಬೊವೆಲಾ ಎಸ್ಟೇಟ್‌ಗಳಲ್ಲಿ, ಶ್ರೀಲಂಕಾದ ತೋಟಗಾರಿಕೆ ಮತ್ತು ಸಮುದಾಯ ಮೂಲಸೌಕರ್ಯ ಸಚಿವ ಕೆ.ವಿ.ಸಮಂತಾ ವಿದ್ಯಾರತ್ನ, ಭಾರತೀಯ ಹೈಕಮಿಷನ್‌ನ ಅಧಿಕಾರಿಗಳು ಮತ್ತು ಸಂಸದರೊಂದಿಗೆ ಸೇರಿ ಈ ಮನೆಗಳ ನಿರ್ಮಾಣಕ್ಕೆ ಅಡಿಪಾಯ ಹಾಕಿದರು. ಈ ನಿರ್ಮಾಣ ಕಾರ್ಯವು 'ಭಾರತೀಯ ವಸತಿ ಯೋಜನೆ'ಯ ನಾಲ್ಕನೇ ಹಂತದ ಎರಡನೇ ಭಾಗವಾಗಿದೆ. ಈ ಯೋಜನೆಯ ಮೂಲಕ ಶ್ರೀಲಂಕಾದ ತೋಟಗಾರಿಕಾ ಪ್ರದೇಶಗಳಲ್ಲಿ ಒಟ್ಟು ನಾಲ್ಕು ಸಾವಿರದ ೭೦೦ ಮನೆಗಳನ್ನು ನಿರ್ಮಿಸಲಾಗುತ್ತಿದೆ.

<><><><>

ಕಾರ್ತಿಕ ಪೂರ್ಣಿಮೆಯ ಹಬ್ಬದಂದು 'ಕಾರ್ತಿಕ ದೀಪಂ' ಬೆಳಗುವ ಕುರಿತಾದ ಸುಪ್ರೀಂ ಕೋರ್ಟ್ ಆದೇಶವನ್ನು ಪಾಲಿಸದ ಆರೋಪದ ಕುರಿತು, ತಮಿಳುನಾಡು ಸರ್ಕಾರದ ವಿರುದ್ಧ ಬಿಜೆಪಿ ಇಂದು ವಾಗ್ದಾಳಿ ನಡೆಸಿದೆ. ನವದೆಹಲಿಯಲ್ಲಿರುವ ಪಕ್ಷದ ಪ್ರಧಾನ ಕಚೇರಿಯಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ಡಾ. ಸುಧಾಂಶು ತ್ರಿವೇದಿ, ತಮಿಳುನಾಡು ಸರ್ಕಾರ, ಸಾಂವಿಧಾನಿಕ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಕಡೆಗಣಿಸಿದೆ. ಕಾರ್ತಿಕ ಪೂರ್ಣಿಮೆಯ ದಿನದಂದು ದೀಪಗಳನ್ನು ಬೆಳಗಿಸಬೇಕೆಂಬ ಸುಪ್ರೀಂ ಕೋರ್ಟ್‌ನ ತೀರ್ಪನ್ನು ತಮಿಳುನಾಡು ಸರ್ಕಾರ ಪಾಲಿಸಿಲ್ಲ ಎಂದು ಆರೋಪಿಸಿದರು.

<><><><>

ಭೋಪಾಲ್‌ನಲ್ಲಿ ನಡೆಯಲಿರುವ ಮಹಿಳಾ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಹಾಕಿ ಪಂದ್ಯಾವಳಿಯ ಅಂತಿಮ ಲೀಗ್ ಹಂತದ ಪಂದ್ಯದಲ್ಲಿಂದು ಭಾರತ ಮತ್ತು ಜಪಾನ್ ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭ ಗಂಟೆಗೆ ಪ್ರಾರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>